ಅರ್ಹ ಬಡವರಿಗೆ ಬಿ.ಪಿ.ಎಲ್. ಕಾರ್ಡ್ ವಿತರಣೆ

2688 (2299); ಶ್ರೀ ಗೋಪಾಲಯ್ಯ ಕೆ (ಮಹಾಲಕ್ಷ್ಮೀ ಲೇಔಟ್)

ಅ) ಬೆಂಗಳೂರು ನಗರದ ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳದೇ ಇರತಕ್ಕ ಅರ್ಹ ಬಡ ಕುಟುಂಬಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಎಲ್ಲಾ ಅರ್ಹ ಬಡ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್ ವಿತರಿಸಲು ಆಯಾ ವಿಧಾನ ಸಭಾ ಕ್ಷೇತ್ರದ ಶಾಸಕರಿಂದ ಬಿಪಿಎಲ್ ಕಾರ್ಡ್‌ಗೆ ಅರ್ಹ ಬಡ ಕುಟುಂಬಗಳ ಪಟ್ಟಿಯನ್ನು ಪಡೆದು ಕ್ರಮ ಕೈಗೊಳ್ಳಲು ಸರ್ಕಾರ ಆಲೋಚಿಸುತ್ತದೆಯೇ;

ಶ್ರೀ ದಿನೇಶ ಗುಂಡೂರಾವ್ (ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಹೌದು.

ಆ) ಬೆಂಗಳೂರು ನಗರದ ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳದೆ ಇರತಕ್ಕ ಅರ್ಹ ಬಡ ಕುಟುಂಬಗಳು ಮೇ–2015 ರಿಂದ ಬೆಂಗಳೂರು–ಒನ್, ಕರ್ನಾಟಕ–ಒನ್, ಅಟಲ್ ಜನಸ್ನೇಹಿ ಕೇಂದ್ರಗಳಲ್ಲಿ ಹಾಗೂ ರಾಜ್ಯದ ಎಲ್ಲಾ ಗ್ರಾಮಪಂಚಾಯಿತಿ ಕಛೇರಿಗಳು, ತಾಲ್ಲೂಕು ಕೇಂದ್ರಗಳಲ್ಲಿರುವ ನೋಂದಾಯಿತ ಫೋಟೋ ಕೇಂದ್ರಗಳಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಹಿಂದುಳಿದ ಜಿಲ್ಲೆಗಳಲ್ಲಿ ವಿಜ್ಞಾನ ತಂತ್ರಜ್ಞಾನ ಸಂಸ್ಥೆಗಳ ಸ್ಥಾಪನೆ

2690 (3653); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ಸಂವಿಧಾನದ ಕಲಂ 371 (ಜೆ) ರ ಅನ್ವಯ ವಿಶೇಷ ಸ್ಥಾನಮಾನ ಲಭ್ಯವಾಗಿದ್ದು, ಈ ಭಾಗದ ಜಿಲ್ಲೆಗಳಲ್ಲಿ ಸರ್ಕಾರ ವಿಶೇಷ ಆಸಕ್ತಿ ವಹಿಸಿ ಮಾಹಿತಿ ತಂತ್ರಜ್ಞಾನ ಮತ್ತು ವಿಜ್ಞಾನ

ತಂತ್ರಜ್ಞಾನ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಈ ಭಾಗದ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ದೊರಕಿಸಿ ಕೊಡಲು ಯಾವ ಕ್ರಮವನ್ನು ಕೈಗೊಂಡಿದೆ?

ಆ) ಈ ಸಂಬಂಧವಾಗಿ ಈ ಭಾಗದಲ್ಲಿ ಐಟಿ ಬಿಟಿ ಸಂಸ್ಥೆಗಳನ್ನು ಸ್ಥಾಪಿಸಲು ಮುಂದೆ ಬರುವವರಿಗೆ ಸರ್ಕಾರ ಯಾವ ಯಾವ ಸೌಲಭ್ಯ ಮತ್ತು ಸವಲತ್ತುಗಳನ್ನು ನೀಡಲಾಗಿದೆ?

ಇ) ಕಳೆದ ಎರಡು ವರ್ಷಗಳಲ್ಲಿ ಈ ಭಾಗದ ವಿವಿಧ ಜಿಲ್ಲೆಗಳಲ್ಲಿ ಐಟಿ ಬಿಟಿ ಸಂಸ್ಥೆಗಳನ್ನು ಸ್ಥಾಪಿಸಲು ಯಾವ ಕ್ರಮ ವಹಿಸಿದೆ? (ಪೂರ್ಣ ವಿವರಗಳನ್ನು ಒದಗಿಸುವುದು)

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

ಅ) **ಮತ್ತು** ಆ) ಬೆಂಗಳೂರು ನಗರ ಹೊರತುಪಡಿಸಿ ಉಳಿದ ಕಡೆ ಐಟಿ ಉದ್ಯಮವನ್ನು ಪ್ರೋತ್ಸಾಹಿಸುವ ಸಲುವಾಗಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಗಳಿಗೆ ಸರ್ಕಾರವು ಘೋಷಿಸಿರುವ ಐ4 ನೀತಿಯನ್ವಯ ಈ ಕೆಳಕಂಡ ಸೌಲಭ್ಯಗಳನ್ನು ನೀಡಿ ಪ್ರೋತ್ಸಾಹಿಸಲಾಗುವುದು.

1) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರ ವಲಯದಲ್ಲಿ ಉದ್ಯೋಗ ಉತ್ತೇಜನಾಧಾರಿತ ಭೂ ಹಂಚಿಕೆ;
2) Start-up ಕಂಪನಿಗಳನ್ನು ಪ್ರಾರಂಭಿಸಲು ಅವಕಾಶಗಳು;
3) ಏಕ ಗವಾಕ್ಷಿಯಾಗಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ;
4) ಕರ್ನಾಟಕ ಕೈಗಾರಿಕಾ ಉದ್ಯೋಗ, ಆದೇಶ ನಿಯಮ (standing order) 1946ರನ್ವಯ IT/ ITEs/ Knowledge/ Start-up ಕೈಗಾರಿಕೆಗಳಿಗೆ ವಿನಾಯ್ತಿ;

5) IT/ ITEs / Startups / Animation / Gaming/ Computer Graphics / Telecom/BPO/KPO ಹಾಗೂ ಇತರೆ ಜ್ಞಾನಾಧಾರಿತ ಉದ್ದಿಮೆಗಳನ್ನು ಅವಶ್ಯಕ ಸೇವೆಗಳಾಗಿ ಪರಿಗಣನೆ;

6) ಪಿ.ಎಫ್ ಹಾಗೂ ಇ.ಎಸ್.ಐ ವಂತಿಗೆಯ ಹಿಂಪಾವತಿ;

7) ವಿದ್ಯುತ್‌ಚ್ಛಕ್ತಿ ದರದಲ್ಲಿ ರಿಯಾಯಿತಿ;

8) ಸ್ಟ್ಯಾಂಪ್ ಶುಲ್ಕದಲ್ಲಿ ವಿನಾಯಿತಿ;

ಇ) ಕಲಬುರ್ಗಿ ಜಿಲ್ಲೆಯಲ್ಲಿ ಕಿಯೋನಿಕ್ಸ್ ಮುಖಾಂತರ ಐಟಿ ಪಾರ್ಕ್‌ನ್ನು ಸ್ಥಾಪಿಸಲಾಗಿರುತ್ತದೆ. ಈ ಪಾರ್ಕ್‌ನಲ್ಲಿ ಐಟಿ ಘಟಕಗಳಿಗೆ ಅಗತ್ಯ ಪ್ರದೇಶವನ್ನು (built-up space) ಪ್ರತಿ ಚ.ಅಡಿಗೆ ₹ 5/–ರಂತೆ ರಿಯಾಯಿತಿ ದರದಲ್ಲಿ ಬಾಡಿಗೆ ನೀಡಲಾಗಿದೆ.

ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳ ಅನುಷ್ಠಾನ

2691 (3654); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಕೇಂದ್ರ ಸರ್ಕಾರದ ಗ್ರಾಮೀಣ ಆರೋಗ್ಯ ಕಲ್ಯಾಣ ಸೇವೆ ಯೋಜನೆಯಡಿಯಲ್ಲಿ (Rural Family Welfare services) ಗ್ರಾಮೀಣ ಭಾಗದಲ್ಲಿ ಆರೋಗ್ಯ ಸೇವೆಯನ್ನು ನೀಡಲು ಕಳೆದ ಮೂರು ವರ್ಷಗಳ ಅವಧಿಯಲ್ಲಿ ಪ್ರತಿ ವರ್ಷ ರಾಜ್ಯ ಸರ್ಕಾರವು ತನ್ನ ಪಾಲಿನ ಎಷ್ಟು ಹಣವನ್ನು ಖರ್ಚು ಮಾಡಿದೆ; ಈ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರದಿಂದ ಈ ಅವಧಿಯಲ್ಲಿ ಬಂದಿರುವ ಹಣವೆಷ್ಟು;

ಆ) ಈ ಎರಡೂ ಅನುದಾನದಿಂದ ರಾಜ್ಯದ ಗ್ರಾಮೀಣ ಭಾಗದ ಜನರಿಗೆ ಯಾವ ಯಾವ ಆರೋಗ್ಯ ಸೇವೆಯನ್ನು ಒದಗಿಸಲಾಗಿದೆ; ಇದಕ್ಕಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಿಂದ ಪ್ರತಿ ವರ್ಷ ವೆಚ್ಚ ಮಾಡಿದ ಹಣವೆಷ್ಟು (ವಿವರ ಒದಗಿಸುವುದು)?